ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಶಾಖೆ / ವಿಷಯ : DEPARTMENT / SUBJECT: ಶಾಸಕರ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 23/1/20.

# ಶಾಸಕರ ವಾಹನಗಳ ನಾಮಫಲಕ: ಕ್ರಮಕ್ಕೆ ಮನವಿ

ಉ.ವಾ 23/1/20

ಬೆಂಗಳೂರು: ಹಾಲಿ ಹಾಗೂ ಮಾಜಿ ಶಾಸಕರು ತಮ್ಮ ಖಾಸಗಿ ವಾಹನಗಳ ಮೇಲೆ ಹುದ್ದೆ ಹಾಗೂ ಸರ್ಕಾರಿ ಲಾಂಛನ, ಚಿಹ್ನೆಯನ್ನು ಒಳಗೊಂಡ ನಾಮಫಲಕ ಅಳವಡಿಸದಂತೆ ಅಗತ್ಯ ಕ್ರಮ ಜರುಗಿಸಲು ವಿಧಾನಸಭೆ ಸ್ಪೀಕರ್‌ಗೆ ಹೈಕೋರ್ಟ್ ಬುಧವಾರ ಮನವಿ ಮಾಡಿದೆ.ಈ ಕುರಿತಂತೆ ಆನಂದ್ ಶೆಟ್ಟಿ ಎಂಬುವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾ. ಆರ್. ದೇವದಾಸ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಈ ಮನವಿ ಮಾಡಿದೆ.ಗ್ರಾಪಂ, ತಾಪಂ, ಜಿಪಂ, ನಗರ ಪಾಲಿಕೆ, ವಿಧಾನಸಭೆ ಮತ್ತು ಲೋಕಸಭೆಯ ಹಾಲಿ-ಮಾಜಿ ಸದಸ್ಯರು ತಮ್ಮ ಖಾಸಗಿ ವಾಹನಗಳ ಮೇಲೆ ನೋಂದಣಿ ಸಂಖ್ಯೆ ಹೊರತುಪಡಿಸಿ, ಹೆಸರು, ಹುದ್ದೆ ಹಾಗೂ ಸರ್ಕಾರಿ ಲಾಂಛನ, ಚಿಹ್ನೆ ಸೇರಿದಂತೆ ಇನ್ನಿತರ ಯಾವುದೇ ಮಾಹಿತಿಗಳನ್ನು ಒಳಗೊಂಡ ನಾಮ ಫಲಕ ಅಳವಡಿಸಬಾರದು. ಈ ನಿಯಮ ಉಲ್ಲಂಘಿಸಿದ ವಾಹನಗಳ ಮಾಲೀಕರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಹಾಗೂ ಅಂತಹ ಫಲಕಗಳನ್ನು ತೆರವುಗೊಳಿಸಿ ವರದಿ ಸಲ್ಲಿಸಬೇಕು ಎಂದು ಹೈಕೋರ್ಟ್ ಜ.3ರಂದು ಸರ್ಕಾರಕ್ಕೆ ನಿರ್ದೇಶಿಸಿತ್ತು. ಅರ್ಜಿಯು ಬುಧವಾರ ಮತ್ತೆ ವಿಚಾರಣೆಗೆ ಬಂದಿತ್ತು. ಆಗ, ಜನಪ್ರತಿನಿಧಿಗಳು ತಮ್ಮ ಖಾಸಗಿ ವಾಹನಗಳ ಮೇಲೆ ಹೆಸರು, ಹುದ್ದೆ, ಸರ್ಕಾರಿ ಲಾಂಛನ, ಚಿಹ್ನೆ ಅಳವಡಿಸಿಕೊಂಡಿರುವುದು ಗಮನಿಸಿದ ನ್ಯಾಯಪೀಠ, ಈ ಬಗ್ಗೆ ಅಗತ್ಯ ಕ್ರಮ ಜರುಗಿಸುವಂತೆ ವಿಧಾನಸಭೆ ಸ್ಪೀಕರ್‌ರಿಗೆ ಮನವಿ ಮಾಡಿತು.